**ಕೊಡಗು ವಿಶ್ವವಿದ್ಯಾಲಯ**

**KODAGU UNIVERSITY**

---

No: KU/REG/ACC/2023-24/101

ಕುಲಸಚಿವರ ಕಛೇರಿ
ಜ್ಞಾನಕಾವೇರಿ ಆವರಣ
ಚಿಕ್ಕಅಳುವಾರ – 571232
E-Mail– reg-admkuk@karnataka.gov.in
Date: 11.09.2023

## ಅಧಿಸೂಚನೆ

**ವಿಷಯ:** 2023–24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸುವ ಕುರಿತು

**ಉಲ್ಲೇಖ:** 1. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 22.08.2023
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 11.09.2023

*****

ಮೇಲಿನ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಕೊಡಗು ವಿಶ್ವವಿದ್ಯಾಲಯದ ಜ್ಞಾನಕಾವೇರಿ ಆವರಣ ಮತ್ತು ಕೊಡಗು ವಿಶ್ವವಿದ್ಯಾಲಯದಲ್ಲಿ ಸಂಯೋಜನೆಗೊಳಗೊಂಡ ಘಟಕ ಕಾಲೇಜು, ಖಾಸಗಿ ಅನುದಾನಿತ ಹಾಗೂ ಅನುದಾನೇತರ ಮಹಾವಿದ್ಯಾಲಯಗಳಲ್ಲಿ 2023–24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಎಂ.ಎ/ ಎಂ.ಕಾಂ/ ಎಂ.ಎಸ್.ಡಬ್ಲ್ಯೂ/ ಎಂ.ಎಸ್ಸಿ/ ಎಂಬಿಎ(TTM)/ ಪಿ.ಜಿ. ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ PG-CBCS (ಮಾತೃ ವಿಶ್ವವಿದ್ಯಾಲಯವಾದ ಮಂಗಳೂರು ವಿಶ್ವವಿದ್ಯಾನಿಲಯದ ನಿಯಮಾವಳಿಗಳನ್ವಯ) ಅರ್ಹತೆಯ ಪ್ರಕಾರ ಅರ್ಜಿಗಳನ್ನು ಆಹ್ವಾನಿಸಿ ಪ್ರವೇಶಾತಿಯನ್ನು ಕೈಗೊಳ್ಳಲು ಈ ಕೆಳಗಿನಂತೆ ದಿನಾಂಕಗಳನ್ನು ವಿಸ್ತರಿಸಿ ಅಧಿಸೂಚನೆ ಹೊರಡಿಸಲಾಗಿದೆ.

| | | |
|---|---|---|
| **1.** | **ಪ್ರವೇಶಾತಿ ಪ್ರಾರಂಭ ದಿನಾಂಕ** | **23.08.2023** |
| **2.** | **ಪ್ರವೇಶಾತಿ ದಂಡಶುಲ್ಕ ರಹಿತ ಕೊನೆಯ ದಿನಾಂಕ** | **25.09.2023** |
| **3.** | **ಪ್ರವೇಶಾತಿ ದಂಡಶುಲ್ಕ ರೂ 500/– ಸಹಿತ ಕೊನೆಯ ದಿನಾಂಕ** | **30.09.2023** |

ಮೇಲಿನ ಪ್ರವೇಶಾತಿ ವಿವರಗಳನ್ನು ಹಾಗೂ ದಿನಾಂಕಗಳನ್ನು ಘಟಕ ಕಾಲೇಜು ಹಾಗೂ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳು ತಮ್ಮ ಕಾಲೇಜಿನ ವೆಬ್‌ಸೈಟ್ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸುವುದರ ಜೊತೆಗೆ ಘಟಕ ಹಾಗೂ ಪದವಿ ಕಾಲೇಜಿನ ಪ್ರಾಂಶುಪಾಲರು, ವಿದ್ಯಾರ್ಥಿಗಳು ಹಾಗೂ ಪೋಷಕರ ಗಮನಕ್ಕೆ ತರಲು ಸೂಚಿಸಲಾಗಿದೆ.

**ಪ್ರಾಂಶುಪಾಲರುಗಳಿಗೆ/ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಮಹಾವಿದ್ಯಾಲಯಗಳು ಎಲ್ಲಾ ಸ್ನಾತಕೋತ್ತರ ತರಗತಿಗಳ ಪ್ರವೇಶ ಮಿತಿ (Intake) ಸಂಖ್ಯೆಗಳು ವಿಶ್ವವಿದ್ಯಾಲಯ ಅನುಮೋದನೆ ಮಾಡಿದ ಸಂಖ್ಯೆಯನ್ನು ಮೀರಬಾರದು.

2. UGC ಯಿಂದ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳಿಂದ ಸ್ನಾತಕ ಪದವಿ ಪಡೆದ ವಿದ್ಯಾರ್ಥಿಗಳು ಮಾತ್ರ ಪ್ರವೇಶಾತಿಗೆ ಅರ್ಹರಾಗಿರುತ್ತಾರೆ.
3. ಪ್ರವೇಶಾತಿ ಅರ್ಜಿಗಳನ್ನು ಮತ್ತು ಮಾಹಿತಿ ವಿವರಗಳನ್ನು ಕೊಡಗು ವಿಶ್ವವಿದ್ಯಾಲಯದ ಜಾಲತಾಣ (kuk.karnataka.gov.in) ದಿಂದ ಪಡೆದುಕೊಳ್ಳಬಹುದಾಗಿದೆ.

<u>**ವಿಶೇಷ ಸೂಚನೆ:**</u>

1. ಪ್ರವೇಶಾತಿಯ ಕಡೆಯ ದಿನಾಂಕಗಳು ಮುಗಿದ ನಂತರ, ಯಾವುದೇ ವಿದ್ಯಾರ್ಥಿಗಳ ಮನವಿಯನ್ನು ವಿಶ್ವವಿದ್ಯಾಲಯಕ್ಕೆ ರವಾನೆ (Forward) ಮಾಡಬಾರದಾಗಿ ಈ ಮೂಲಕ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸಿದೆ. ಪ್ರವೇಶ ಪ್ರಕ್ರಿಯೆಗಳನ್ನು ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಬೇಕು.
2. ಹಳೆಯ ವಿದ್ಯಾರ್ಥಿಗಳಿಗೆ ಮರು ಪ್ರವೇಶ ನೀಡುವ ಮುನ್ನ ನಿಯಮಾವಳಿ(Regulations)ಗಳಿಗೆ ಅನುಗುಣವಾಗಿ ವಿಶ್ವವಿದ್ಯಾಲಯದ ಅನುಮತಿ ಪಡೆಯುವುದು ಕಡ್ಡಾಯ, ಒಂದು ಪಕ್ಷ ವಿಶ್ವವಿದ್ಯಾಲಯದನುಮತಿ ಪಡೆಯದೇ ಪ್ರವೇಶ ನೀಡಿದ ಪಕ್ಷದಲ್ಲಿ, ಮುಂದಿನ ಎಲ್ಲಾ ರೀತಿಯ ವ್ಯಾಜ್ಯ, ದಾವೆ, ಕಟ್ಲೆ(Litigation) ಗಳಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ನೇರ ಹೊಣೆಗಾರರಾಗಿರುತ್ತಾರೆ ಎಂದು ಸ್ಪಷ್ಟಪಡಿಸಲಾಗಿದೆ.

3. ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರದಿಂದ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹವಿರುವ ಕಾಲೇಜುಗಳು, ವಿದ್ಯಾರ್ಥಿಗಳ ತಂದೆ/ತಾಯಿ/ಪೋಷಕರ ವಾರ್ಷಿಕ ವರಮಾನಕ್ಕೆ ಅನುಗುಣವಾಗಿ (ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರ ಅಧಿಸೂಚನೆಗಳ ಅನುಸಾರ) SC/ST, OBC ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಬೇಕು, ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿವೇತನಕ್ಕೆ ನಿಗದಿತ ಸಮಯದಲ್ಲಿ ಸಂಬಂಧಿಸಿದ ಇಲಾಖೆಗೆ ಅರ್ಜಿ ಸಲ್ಲಿಸಬೇಕು ಮತ್ತು ಪ್ರಾಂಶುಪಾಲರು ಸಹ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ವಿದ್ಯಾರ್ಥಿವೇತನ ಮಂಜೂರಾಗದಂತಹ ಅಥವಾ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸದ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಶುಲ್ಕವನ್ನು ಪಾವತಿಸಿಕೊಳ್ಳಬೇಕು.

**Sd/-**

**ಕುಲಸಚಿವರು (ಪ್ರಭಾರ)**

ಪ್ರತಿ:
1. ಕುಲಸಚಿವರು (ಮೌಲ್ಯಮಾಪನ), ಕೊಡಗು ವಿಶ್ವವಿದ್ಯಾಲಯ
2. ಹಣಕಾಸು ಅಧಿಕಾರಿಗಳ ಕಛೇರಿ, ಕೊಡಗು ವಿಶ್ವವಿದ್ಯಾಲಯ
3. ಸಮಾಜ ಕಲ್ಯಾಣಾಧಿಕಾರಿಗಳು, ಕೊಡಗು ಜಿಲ್ಲೆ
4. ಜಿಲ್ಲಾಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಛೇರಿ, ಕೊಡಗು ಜಿಲ್ಲೆ.
5. ಪ್ರಬಂಧಕರು, ಕೆನರಾ ಬ್ಯಾಂಕ್, ಹೆಬ್ಬಾಲೆ, ಕೊಡಗು ಜಿಲ್ಲೆ.
6. ಮಾನ್ಯ ಕುಲಪತಿಯವರ ಆಪ್ತಕಾರ್ಯದಶಿಗಳು ಹಾಗೂ ಆಪ್ತ ಸಹಾಯಕರು, ಕೊಡಗು ವಿಶ್ವವಿದ್ಯಾಲಯ
7. ಕಛೇರಿ ಪ್ರತಿ